**Akashvani : Bangalore**
**Regional Bulletin In Kannada**
**02.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.06.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಆಲಮಟ್ಟಿ ಆಣೆಕಟ್ಟಿನ ಎತ್ತರ ಹೆಚ್ಚಳ ವಿಚಾರ - ಕೇಂದ್ರ ಸಚಿವರ ಸಹಕಾರ ಕೋರಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೨. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬೆಸ್ಕಾಂನ ಸೌರಶಕ್ತಿ ಚಾಲಿತ ಚಾರ್ಜಿಂಗ್ ಘಟಕ ಲೋಕಾರ್ಪಣೆಗೊಳಿಸಿದ ಸಚಿವ ಕೆ.ಜೆ.ಜಾರ್ಜ್**

**೩. ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕಾಲುವೆ ಯೋಜನೆ ವಿವಾದ- ಸರ್ವಪಕ್ಷ ಸಭೆ ಕರೆಯುವಂತೆ ಬಿಜೆಪಿ ಆಗ್ರಹ**

**೪. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದರೆ ಕಠಿಣ ಕ್ರಮ - ಎಚ್ಚರಿಕೆ ನೀಡಿದ ಜಿಲ್ಲಾಡಳಿತ**

**೫. ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷಾ ಕಾರ್ಯ ಜೂನ್ ೮ರವರೆಗೆ ವಿಸ್ತರಣೆ**

**<><*<><>*><>**

ಕೃಷ್ಣಾ ನ್ಯಾಯಾಧೀಕರಣದ ತೀರ್ಪಿನಂತೆ ರಾಜ್ಯದ ಪಾಲಿನ ನೀರು ಬಳಸಿಕೊಳ್ಳಲು ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ೫೨೪ ಮೀಟರ್ ಗೆ ಹೆಚ್ಚಿಸಬೇಕಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ಪತ್ರ ಬರೆದು ಆಕ್ಷೇಪ ವ್ಯಕ್ತಪಡಿಸಿದ್ದು ರೈತರ ಹಿತ ಕಾಯಲು ಎಲ್ಲಾ ಸಂಸದರು, ಕೇಂದ್ರ ಸಚಿವರು ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ. ಇದೇವೇಳೆ ಹೇಮಾವತಿ ಲಿಂಕ್ ಕೆನಾಲ್ ಯೋಜನೆ ವಿರೋಧಿಸುತ್ತಿರುವುದು ಕೇವಲ ರಾಜಕಾರಣಕ್ಕಾಗಿ ಎಂದು ತಿಳಿಸಿದ್ದಾರೆ. ಕಳೆದ ಹತ್ತು ವರ್ಷಗಳಿಂದ ಕುಣಿಗಲ್ ಪಾಲಿನ ನೀರು ಶೇಕಡ ೬೦ರಷ್ಟು ಬಳಕೆಯಾಗಿಲ್ಲ. ಈ ಹಿನ್ನೆಲೆಯಲ್ಲಿ ಈ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಈ ನೀರನ್ನು ಬೆಂಗಳೂರು ದಕ್ಷಿಣ ಜಿಲ್ಲೆಗೆ ತೆಗೆದುಕೊಂಡು ಹೋಗಲಾಗುತ್ತಿದೆ ಎಂದು ಅಪಪ್ರಚಾರ ಮಾಡಲಾಗುತ್ತಿದೆ ಎಂದು ಅಸಮಧಾನ ವ್ಯಕ್ತ ಪಡಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಶೇ.೬೫ರಷ್ಟು ನವೀಕರಿಸಬಹುದಾದ ಇಂಧನದಿಂದ ವಿದ್ಯುತ್ ಪಡೆಯಲಾಗುತ್ತಿದ್ದು, ಸೌರಶಕ್ತಿ ವಿದ್ಯುತ್ ಉತ್ಪಾದನೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸೌರಶಕ್ತಿ ಚಾಲಿತ ಇವಿ ಚಾರ್ಜಿಂಗ್ ಹಬ್ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ರೈತರ ಸಹಭಾಗಿತ್ವದೊಂದಿಗೆ ಸುಮಾರು ೧೦ ಸಾವಿರ ಎಕರೆ ಪ್ರದೇಶದಲ್ಲಿ ಸೌರ ಶಕ್ತಿ ವಿದ್ಯುತ್ ಉತ್ಪಾದನೆಗೆ ಯೋಜನೆ ರೂಪಿಸಲಾಗಿದೆ. ಸುಮಾರು ೪೨೦೦ ಇವಿ ಚಾರ್ಜಿಂಗ್ ಘಟಕಗಳನ್ನು ನಿರ್ಮಿಸಲಾಗಿದೆ. ಇಂದು ದೇಶದಲ್ಲಿಯೇ ಪ್ರಥಮವಾಗಿ ಬೆಸ್ಕಾಂ ವತಿಯಿಂದ ಸೌರಶಕ್ತಿ ಚಾಲಿತ ಇವಿ ಚಾರ್ಜಿಂಗ್ ಘಟಕ ನಿರ್ಮಿಸಲಾಗಿದೆ ಎಂದು ಹೇಳಿದ್ದಾರೆ. ಇಲ್ಲಿ ೨೩ ಸೌರಶಕ್ತಿ ಚಾಲಿತ ಚಾರ್ಜಿಂಗ್ ಪಾಯಿಂಟ್‌ಗಳಿದ್ದು, ೧೮ ಇವಿ ಕಾರುಗಳ ಚಾರ್ಜಿಂಗ್ ಮಾಡುವ ಸಾಮರ್ಥ್ಯ ಹೊಂದಿದೆ ಎಂದು ಹೇಳಿದ್ದಾರೆ.

<><*<><>*><>

ಕುಸುಮ್ - ಸಿ ಯೋಜನೆಗೆ ಇದೇ ತಿಂಗಳ ೧೧ ರಂದು ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕು ತೊಂಡೇಬಾವಿ ಗ್ರಾಮದಲ್ಲಿ ಚಾಲನೆ ನೀಡಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕು ತೊಂಡೇಬಾವಿ ಗ್ರಾಮಕ್ಕೆ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ಕುಸುಮ್ ಸಿ ಮೂಲಕ ೨೪೦೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗಲಿದ್ದು, ಇಲ್ಲಿಂದಲೇ ಸುತ್ತಮುತ್ತಲ ರೈತರ ಪಂಪ್ ಸೆಟ್ ಗಳಿಗೆ ವಿದ್ಯುತ್ ಪೂರೈಸಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

**ಧ್ವನಿ : ಸಚಿವ ಕೆ.ಜೆ.ಜಾರ್ಜ್ ( ೨೬ ಸೆಕೆಂಡ್ಸ್)**

<><*<><>*><>

ತುಮಕೂರಿನ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕಾಲುವೆ ಯೋಜನೆ ವಿರುದ್ಧದ ಪ್ರತಿಭಟನೆಗಳಿಗೆ ಸಂಬಂಧಿಸಿದಂತೆ ಶಾಸಕರು ಮತ್ತು ಸ್ವಾಮೀಜಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದ ಸರ್ಕಾರದ ವಿರುದ್ಧ ಬಿಜೆಪಿ ಅಸಮಾಧಾನ ವ್ಯಕ್ತಪಡಿಸಿದೆ. ಆಂದೋಲನದಲ್ಲಿ ಭಾಗವಹಿಸಿದ್ದ ಶಾಸಕರು, ರೈತರ ವಿರುದ್ಧ ಪ್ರಕರಣ ದಾಖಲಿಸಿರುವ ಕ್ರಮ ಅತ್ಯಂತ ಖಂಡನೀಯ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಜನರ ಬೇಡಿಕೆಗಳಿಗೆ ಸೂಕ್ತ ಪರಿಹಾರವನ್ನು ಕಂಡುಕೊಳ್ಳುವ ಬದಲು, ಪ್ರತಿಭಟನೆಯನ್ನು ಹತ್ತಿಕ್ಕಲು ಪ್ರಯತ್ನಿಸಲಾಗುತ್ತಿದೆ" ಎಂದು ದೂರಿದ್ದಾರೆ. ಪ್ರತಿಪಕ್ಷನಾಯಕ ಆರ್. ಅಶೋಕ ಮಾತನಾಡಿ ಸರ್ಕಾರ ತಕ್ಷಣವೇ ಸರ್ವಪಕ್ಷ ಸಭೆ ಕರೆದು

ಚುನಾಯಿತ ಪ್ರತಿನಿಧಿಗಳು, ಮತ್ತು ರೈತ ಮುಖಂಡರೊಂದಿಗೆ ಚರ್ಚೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ. ಇದೇ ವೇಳೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಳ್ಳು ಆಪಾದನೆ ಮಾಡಿ ಹಿಂದೂ ಮುಖಂಡರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತಿದ್ದು, ಇದರ ವಿರುದ್ಧ ಹೋರಾಟ ನಡೆಸಲಾಗುತ್ತಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

**<><*<><>*><>**

ಜನೌಷಧಿ ಕೇಂದ್ರದ ಬ್ಯಾನರ್ ಮೇಲೆ ಪ್ರಧಾನಿ ಭಾವಚಿತ್ರ ಇದೆ ಎಂಬ ಕಾರಣಕ್ಕೆ ರಾಜ್ಯದಲ್ಲಿ ಜನ ಔಷಧಿ ಕೇಂದ್ರವನ್ನು ಬಂದ್ ಮಾಡಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು ರಾಜ್ಯ ಸರ್ಕಾರ ಈ ಕೇಂದ್ರಗಳನ್ನು ಆರಂಭ ಮಾಡಬೇಕು. ಇಲ್ಲದೇ ಹೋದಲ್ಲಿ ಬಿಜೆಪಿ ರಾಜ್ಯಾದ್ಯಂತ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಇದೇ ವೇಳೆ ಕಮಲ ಹಾಸನ ಕನ್ನಡದ ಭಾಷೆಯ ಬಗ್ಗೆ ಹಗುರವಾಗಿ ಮಾತನಾಡಿದ್ದು ಖಂಡನೀಯ ಎಂದು ತಿಳಿಸಿದ್ದಾರೆ. ಕಳೆದ ಎರಡು ವರ್ಷಗಳಲ್ಲಿ ೧೪೮ ಸರ್ಕಾರಿ ಕನ್ನಡ ಶಾಲೆಗಳನ್ನು ಮುಚ್ಚಲಾಗಿದ್ದು ೫೮೪ ಖಾಸಗಿ ಶಾಲೆಗಳಿಗೆ ಅನುಮತಿ ನೀಡಲಾಗಿದೆ ಎಂದು ಆರೋಪಿಸಿದ್ದಾರೆ.

**ಧ್ವನಿ : ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ( ೨೬ ಸೆಕೆಂಡ್ಸ್)**

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಅರುಣ್ ಕೆ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಮಾತನಾಡಿದ ಅವರು, ಜಿಲ್ಲೆಯಲ್ಲಿ ಪೊಲೀಸರು ತಮ್ಮ ಕರ್ತವ್ಯದ ಭಾಗವಾಗಿ ಕೆಲ ಸಂಘಟನೆಗಳ ಮುಖಂಡರ ಮನೆಗೆ ಮನೆಗಳಿಗೆ ಭೇಟಿ ನೀಡುತ್ತಿದ್ದಾರೆ. ಕಾನೂನು ಸುವ್ಯವಸ್ಥೆ ಸಹಜಗೊಳ್ಳುವವರೆಗೆ ಈ ಪ್ರಕ್ರಿಯೆ ಮುಂದುವರೆಯಲಿದೆ. ಈ ಸಂದರ್ಭದಲ್ಲಿ ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ. ಕಡಬದಲ್ಲಿ ಪೊಲೀಸ್ ಠಾಣೆ ಮುಂದೆ ಗುಂಪು ಸೇರಿ ಪ್ರತಿಭಟನೆ ನಡೆಸಿದವರ ವಿರುದ್ಧ ಕಡಬ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿ ಕೆ. ಮನ್ಮಥ ರಾವ್ ಬೆಂಗಳೂರಿನಲ್ಲಿಂದು ಪ್ರಮಾಣವಚನ ಸ್ವೀಕರಿಸಿದರು. ಹಂಗಾಮಿ ಮುಖ್ಯ ನ್ಯಾಯಮೂರ್ತಿ ಎ. ಕಾಮೇಶ್ವರ್ ರಾವ್ ಅವರು ನೂತನ ನ್ಯಾಯಮೂರ್ತಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಈ ವೇಳೆ, ರಾಜ್ಯಹೈಕೋರ್ಟ್

ನ ನ್ಯಾಯಮೂರ್ತಿಗಳು, ಬೆಂಗಳೂರು ವಕೀಲರ ಸಂಘದ ಪದಾಧಿಕಾರಿಗಳು ಸೇರಿದಂತೆ ಹಿರಿಯ ವಕೀಲರು ಉಪಸ್ಥಿತರಿದ್ದರು.

<><*<><>*><>

ಪರಿಶಿಷ್ಟ ಜಾತಿಯಲ್ಲಿನ ೧೦೧ ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶ ಸಂಗ್ರಹಿಸುವ ಕುರಿತ ಸಮೀಕ್ಷಾ ಕಾರ್ಯವನ್ನು ಇದೇ ೬ರವರೆಗೆ ಮತ್ತು ಆನ್ ಲೈನ್ ನೋಂದಣಿಯನ್ನು ಜೂನ್ ೮ ರವರೆಗೆ ವಿಸ್ತರಿಸಲಾಗಿದೆ ಎಂದು ನ್ಯಾಯಮೂರ್ತಿ ಡಾ. ಹೆಚ್.ಎನ್.ನಾಗಮೋಹನ್ ದಾಸ್, ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ತಿಳಿಸಿದ್ದಾರೆ. ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಳೆ/ಹವಾಮಾನ ವೈಪರೀತ್ಯ ಕಾರಣಗಳಿಂದ ಸಮೀಕ್ಷೆ ಕಾರ್ಯ ಪೂರ್ಣಗೊಂಡಿಲ್ಲದ ಕಾರಣ ವಿವಿಧ ಸಂಘ-ಸಂಸ್ಥೆಗಳ ಮುಖಂಡರು ಸಮೀಕ್ಷಾ ಅವಧಿಯನ್ನು ವಿಸ್ತರಿಸುವಂತೆ ಮನವಿ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿಯ ಜನರು ಈ ಸಮೀಕ್ಷಾ ಕಾರ್ಯದಲ್ಲಿ ಸಂಪೂರ್ಣವಾಗಿ ಭಾಗವಹಿಸಲು ಕೋರಿದ್ದಾರೆ.

<><*<><>*><>

ಬೆಳಗಾವಿ ಜಿಲ್ಲೆ ಮತ್ತಿಕೊಪ್ಪ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ, ಕೃಷಿ ಇಲಾಖೆ ಹಾಗೂ ಇಫ್ಕೋ, ರೇಣುಕಾ ಶುಗರ್ಸ್  ಆಶ್ರಯದಲ್ಲಿ ಇಂದು ಬೆಳಗಾವಿ ಜಿಲ್ಲೆ ಜಕಬಾಳ, ತೆಗ್ಗಿಹಾಳ ಹಾಗೂ ಅವರಗಾಳ ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾ ನಡೆಯಿತು.  ಕೃಷಿ ವಿಜ್ಞಾನ ಕೇಂದ್ರದ ನಿರ್ದೇಶಕರಾದ  ಮಂಜುನಾಥ ಚೌರಡ್ಡಿ, ಡಾಕ್ಟರ್ ಜಿ.ಬಿ. ವಿಶ್ವನಾಥ, ಡಾ. ಎಸ್. ಎಸ್.ಹಿರೇಮಠ ನೇತೃತ್ವದ ಕೃಷಿ ವಿಜ್ಞಾನಿಗಳ ತಂಡ ರೈತರಿಗೆ ಬೆಳೆಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು.

<><*<><>*><>

ಬೆಂಗಳೂರಿನ  ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶದಲ್ಲಿರುವ ೧೦೮ ಅಡಿ ಎತ್ತರದ ನಾಡ ಪ್ರಭು ಕೆಂಪೇಗೌಡರ ಕಂಚಿನ ಪ್ರತಿಮೆ ಆವರಣದಲ್ಲಿ ನಡೆಯುತ್ತಿರುವ ಕೆಂಪೇಗೌಡ ಥೀಮ್ ಪಾರ್ಕ್ ಕಾಮಗಾರಿಯನ್ನು ಕಂದಾಯ ಸಚಿವ ಕೃಷ್ಣ ಬೈರೇಗೌಡ ಪರಿಶೀಲನೆ ನಡೆಸಿದರು.

೨೦ ಕೋಟಿ ರೂ ವೆಚ್ಚದಲ್ಲಿ ಥೀಮ್ ಪಾರ್ಕ್ ನಿರ್ಮಾಣಗೊಳ್ಳುತ್ತಿದ್ದು, ಆಕರ್ಷಣೀಯ ಪ್ರವಾಸಿ ಕೇಂದ್ರವಾಗಲಿದೆ. ಮುಂದಿನ ನಾಲ್ಕು ತಿಂಗಳಲ್ಲಿ ಥೀಮ್ ಪಾರ್ಕ್ ಕಾಮಗಾರಿ ಪೂರ್ಣಗೊಳ್ಳುವ ಭರವಸೆ ಇದೆ ಎಂದು  ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

<><*<><>*><>

ಮಕ್ಕಳಿಗೆ ಪರಿಸರ ಹಸಿರು ಇಂಧನ , ಸ್ವಚ್ಛತೆ, ನೀರಿನ ಸಂರಕ್ಷಣೆ ಕುರಿತಂತೆ ಅರಿವು ಮೂಡಿಸಲು ಜಿಬಿಐ ವ್ಯಾಪ್ತಿಯ ಶಾಲೆಗಳ ಸಹಯೋಗದಲ್ಲಿ ಬೆಂಗಳೂರು ಹವಾಮಾನ ಕಾರ್ಯ ಯೋಜನೆ ಕ್ಲಬ್ ರಚನೆ ಮಾಡಲಾಗುವುದೆಂದು ಉಪಮುಖ್ಯಮಂತ್ರಿ ಡಿಕೆ.ಶಿವಕುಮಾರ್ ತಿಳಿಸಿದ್ದಾರೆ. ಇದೇ ೫ರಂದು ವಿಶ್ವ ಪರಿಸರ ದಿನಾಚರಣೆ ಹಿನ್ನೆಲೆಯಲ್ಲಿ ಬೆಂಗಳೂರು ಹವಾಮಾನ ಕಾರ್ಯಯೋಜನೆ ಕ್ಲಬ್ ಸ್ಥಾಪಿಸಲಾಗುತ್ತಿದೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಕೋಲಾರ ಜಿಲ್ಲೆಯ ಶ್ರೀನಿವಾಸಪುರ ಸಾರ್ವಜನಿಕ ಆಸ್ಪತ್ರೆಯಲ್ಲಿ ಕೋವಿಡ್ ನಿಯಂತ್ರಣಕ್ಕೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಆಸ್ಪತ್ರೆಯ ಆಡಳಿತ ಅಧಿಕಾರಿ ಡಾ.ಜಿ. ಎಸ್.ಶ್ರೀನಿವಾಸ್ ತಿಳಿಸಿದ್ದಾರೆ.

೨. ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ವ್ಯಾಪ್ತಿಯ ಪದವಿ ಕಾಲೇಜುಗಳ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಇದೇ ೯ ರಿಂದ ಸ್ನಾತಕ ಪದವಿ ಪರೀಕ್ಷೆಗಳು ಆರಂಭವಾಗಲಿದ್ದು, ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಿ ಶಿಕ್ಷಣದ ಗುಣಮಟ್ಟ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯ ಹಲವು ಸುಧಾರಣಾ ಕ್ರಮಗಳಿಗೆ ಮುಂದಾಗಿದೆ ಎಂದು ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವ ಡಾ.ಲೋಕನಾಥ್ ತಿಳಿಸಿದ್ದಾರೆ.

೩. ಪ್ರಸಕ್ತ ಸಾಲಿನ ಅಲ್ಪಸಂಖ್ಯಾತರ ಡಾ.ಎಪಿಜೆ.ಅಬ್ದುಲ್ ಕಲಾಂ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ೬ನೇ ತರಗತಿ ಪ್ರವೇಶಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿದ್ದು, ಇದೇ ೪ ಮತ್ತು ೫ರಂದು ಕೌನ್ಸೆಲಿಂಗ್ ನಿಗದಿಪಡಿಸಲಾಗಿದೆ. ಒಂದು ವೇಳೆ ಕೌನ್ಸಲಿಂಗ್ ಭಾಗವಹಿಸದೇ ಇದ್ದಲ್ಲಿ ಪ್ರವೇಶದ ಸೀಟ್ ರದ್ದಾಗಲಿದೆ.

೪. ನಿಮ್ಮ ಆರೋಗ್ಯ ಚೆನ್ನಾಗಿದ್ದರೆ, ಸುತ್ತಮುತ್ತಲಿನ ಆರೋಗ್ಯವೂ ಉತ್ತಮವಾಗಿರುತ್ತದೆ ಎಂದು ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ೬.೩೫ ಕ್ಕೆ <>*><>**